/

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ

ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/446 /2020-21. ದಿನಾಂಕ :24-3-2021

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ: ಬಿ12(5)ಪಿ.ಆರ್/35/2020-21, ದಿನಾಂಕ:29-09-2020 ಹಾಗೂ ನೋಡಲ್ ಅಧಿಕಾರಿ ರವರು ದಿನಾಂಕ: 20-03-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143 ವಾರ್ಡ್ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿ, ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆಂಕಟೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಶ್ರೀ.ಎಸ್.ಹೇಮಂತ್ ಕುಮಾರ್ | ಸಹಾಯಕ ಅಭಿಯಂತರರು ಬೆಸ್ಕಾಂ | 9449870535 |
| 4 | ಕೆ.ಕಂಪಣ್ಣ | BWSSB | 9844776655 |
| 5 | ಧನಂಜಯ | ಟಿ.ಐ.ವಾರ್ಡ್ ಸಂಖ್ಯೆ:143 | 7353149050 |
| 6 | ಶ್ರೀ.ಪಿ.ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 9964177663 |
| 7 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 8 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 9 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 10 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

Scanned by CamScanner

ದಿನಾಂಕ:-20-03-2021 ರಂದು ನಡೆದ ವಾರ್ಡ್ -143ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ರವರ ಅನುಮತಿಯೊಂದಿಗೆ ವಾರ್ಡ್ ಸಮಿತಿಯ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ, ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ, ಬಸವನಗುಡಿ ಪ್ರದೇಶದಲ್ಲಿ ಈ ಬಾರಿ ತೆಗೆದುಕೊಳ್ಳಲು ಉದ್ದೇಶಿಸಿರುವ ಮತ್ತು ಕಾರಣಾಂತರದಿಂದ ಸ್ಥಗಿತಗೊಂಡಿರುವ ಕಾಮಗಾರಿಗಳ ಪಟ್ಟಿಯನ್ನು ನೀಡುವಂತೆ ಸಭೆಯಲ್ಲಿ ಕೋರಿದರು. ಇದನ್ನು ನೀಡಲು ಕ್ರಮವಹಿಸುವಂತೆ ವಾರ್ಡಿನ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.

ಪುನಃ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ BBMP Road Infrastructure ವತಿಯಿಂದ ಒಟ್ಟು 12 ಸಂಖ್ಯೆಯ ರಸ್ತೆ ಜಂಕ್ಷನ್‌ಗಳನ್ನು "Re modify" ಮಾಡಲು ಗುರುತಿಸಿದ್ದು ಅದರಲ್ಲಿ "ಲಾಲ್‌ಬಾಗ್ ವೆಸ್ಟ್ ಗೇಟ್" ಸೇರಿರುವುದು ತಿಳಿದು ಬಂದಿರುತ್ತದೆ. ಅದರಲ್ಲಿ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ರವರನ್ನು ಪಾಲ್ಗೊಳ್ಳುವಂತೆ ಅನುವು ಮಾಡಿಕೊಡಬೇಕೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ಸೂಕ್ತ ಕ್ರಮ ವಹಿಸಲು BBMP Road Infrastructure ರವರಿಗೆ ತಿಳಿಸಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ಪುನಃ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜು ರವರು ಮಾತನಾಡಿ, ಕನಕಪುರ ರಸ್ತೆಯಲ್ಲಿ ವಸತಿ ಕಟ್ಟಡಗಳಿರುವ ಪ್ರದೇಶದಲ್ಲಿ ಜೈನ ಸಮುದಾಯದವರು ದೇವಸ್ಥಾನ ನಿರ್ಮಾಣ ಮಾಡಲು ಉದ್ದೇಶಿಸಿದ್ದು ಅದನ್ನು ನಿಲ್ಲಿಸಲು ಕ್ರಮ ಕೈಗೊಳ್ಳಬೇಕೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡಿ ಕೆ.ಎಂ.ಸಿ. ಕಾಯ್ದೆ ಅಡಿ ಸೂಕ್ತ ಕ್ರಮ ವಹಿಸಲು ವಾರ್ಡಿನ ಅಭಿಯಂತರರಿಗೆ ತಿಳಿಸಿದರು.

ನಂತರ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ, ಈ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿದ್ದ ವಿಷಯವಾದ ಪೊಬ್ಬತ್ತಿ ಆಸ್ಪತ್ರೆ ಮುಂಭಾಗ ಸಜ್ಜನರಾವ್ ರಸ್ತೆ ಹಾಗೂ ಎನ್.ಎಂ.ಹೆಚ್ ಹೋಟೆಲ್ ಮುಂಭಾಗ ಡಯಾನಗಲ್ ರಸ್ತೆ ಇಲ್ಲಿ "Pedastrain Crossing" ನಿರ್ಮಾಣ ಮಾಡಲು ಸೂಕ್ತ ಕ್ರಮ ವಹಿಸುವಂತೆ ಪುನಃ ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಕ್ರಮ ಕೈಗೊಳ್ಳಲು "BBMP traffic Engineering cell (TEC) ರವರನ್ನು ಪುನಃ ಕೋರಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರ ಪುನಃ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ವಿ.ವಿ.ಪುರಂನಲ್ಲಿ ಇರುವ ಡಯಾನಗಲ್ ರಸ್ತೆಯಲ್ಲಿ ಏಕ ಮುಖ ಸಂಚಾರದ ವ್ಯವಸ್ಥೆಯಿದ್ದು ಇಲ್ಲಿ ಸಾರ್ವಜನಿಕರು ಯಾವುದೇ ಸಂಚಾರಿ ನಿಯಮಗಳನ್ನು

Scanned by CamScanner

ಪಾಲಿಸುತ್ತಿಲ್ಲವೆಂದು ತಿಳಿಸಿ ಇದರಿಂದಾಗಿ ಸಾರ್ವಜನಿಕರಿಗೆ ತುಂಬಾ ಅನಾನುಕೂಲವಾಗುತ್ತಿರುವುದಾಗಿ ತಿಳಿಸಿದರು. ಈ ಬಗ್ಗೆ ಕಟ್ಟುನಿಟ್ಟಾನ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದವರಿಗೆ ತಿಳಿಸಬೇಕೆಂದು ಸಭೆಯಲ್ಲಿ ಕೋರಿದರು. ನೋಡಲ್ ಅಧಿಕಾರಿಗಳು ಮಾತನಾಡಿ ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ವಿ.ವಿ.ಪುರಂ ಟ್ರಾಫಿಕ್ ಪೊಲೀಸ್ ರವರನ್ನು ಕೋರಲಾಗುವುದೆಂದು ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು 24/3/2021
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned by CamScanner